# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

26

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 16/4/21

# ನೈಸರ್ಗಿಕ ವಿಪತ್ತು ಘೋಷಣೆ ಪ್ರಧಾನಿಗೆ ಉದ್ಧವ್ ಠಾಕ್ರೆ ಪತ್ರ

**ಹೊಸದಿಲ್ಲಿ:** ಕೊರೊನಾ ಸಾಂಕ್ರಾಮಿಕ ತುರ್ತು ಪರಿಸ್ಥಿತಿಯನ್ನು ನೈಸರ್ಗಿಕ ವಿಕೋಪ ಎಂದು ಘೋಷಿಸುವಂತೆ ಕೋರಿ ಮಹಾರಾಷ್ಟ್ರ ಮುಖ್ಯಮಂತ್ರಿ ಉದ್ಧವ್ ಠಾಕ್ರೆ ಅವರು ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆದಿದ್ದಾರೆ. ನೈಸರ್ಗಿಕ ವಿಕೋಪ ಎಂದು ಘೋಷಿಸುವುದರಿಂದ ರಾಜ್ಯಗಳು ರಾಜ್ಯ ವಿಕೋಪ ನಿರ್ವಹಣಾ ನಿಧಿ (ಎಸ್‌ಡಿಆರ್‌ಎಫ್) ನೆರವು ಪಡೆಯಲು ಅನುಕೂಲವಾಗಲಿದೆ. ಇದರಿಂದಾಗಿ ಆರೋಗ್ಯ ಸೇವೆಗಳಿಗೆ ಅಗತ್ಯ ಅನುದಾನ ನೀಡಬಹುದಾಗಿದೆ ಎಂದು ಪತ್ರದಲ್ಲಿ ಉದ್ಧವ್ ಉಲ್ಲೇಖಿಸಿದ್ದಾರೆ.



ಮಹಾರಾಷ್ಟ್ರದಲ್ಲಿ ಕೊರೊನಾ ಆರ್ಭಟದ ಪರಿಸ್ಥಿತಿಯನ್ನು ಪತ್ರದಲ್ಲಿ ವಿವರಿಸಿರುವ ಸಿಎಂ ಠಾಕ್ರೆ, '' ಈಗಾಗಲೇ ಮಿನಿ ಲಾಕ್‌ಡೌನ್‌ಗಳನ್ನು ಜಾರಿ ಮಾಡುವ ಹಂತಕ್ಕೆ ಕೊರೊನಾ ಹಾವಳಿ ರಾಜ್ಯದಲ್ಲಿ ಹೆಚ್ಚಿದೆ. ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತೆ ಮೇರೆಗೆ ವಸತಿ ಯೋಜನೆ ಅಡಿಯಲ್ಲಿ ವಯಸ್ಕರಿಗೆ ದಿನಕ್ಕೆ 100 ರೂ. ಮತ್ತು ಮಕ್ಕಳಿಗೆ ದಿನಕ್ಕೆ 60 ರೂ. ನೆರವು ಲಾಕ್‌ಡೌನ್ ಅವಧಿಯಲ್ಲಿ ನೀಡಲು ರಾಜ್ಯ ಸರಕಾರ ತೀರ್ಮಾನಿಸಿದೆ. ಇದಕ್ಕಾಗಿ ರಾಜ್ಯ ವಿಪತ್ತು ನಿರ್ವಹಣಾ ನಿಧಿ ಉಪಯೋಗವಾಗುತ್ತದೆ. ಕೇಂದ್ರ ಸರಕಾರ ಕೂಡ ತನ್ನ ಪಾಲನ್ನು ಶೀಘ್ರ ಬಿಡುಗಡೆ ಮಾಡಬೇಕು. ಸ್ಟಾರ್ಟ್‌ಅಪ್‌ಗಳು ಮತ್ತು ಮಧ್ಯಮ ಗಾತ್ರದ ಉದ್ದಿಮೆಗಳಿಗೆ ನೆರವಾಗುವಂತೆ ಜಿಎಸ್‌ಟಿ ರಿಟರ್ನ್ಸ್ ಅವಧಿಯನ್ನು ವಿಸ್ತರಿಸಬೇಕು. ಬ್ಯಾಂಕ್‌ಗಳಿಗೆ ಪಾವತಿಯಾಗಬೇಕಿರುವ ಸಾಲದ ಕಂತುಗಳಿಗೆ ವಿನಾಯಿತಿ ನೀಡಬೇಕು,'' ಎಂದು ಮನವಿ ಮಾಡಿದ್ದಾರೆ.

ಕಳೆದೊಂದು ವಾರದಿಂದ ನಿತ್ಯ 50 ಸಾವಿರಕ್ಕೂ ಅಧಿಕ ಹೊಸ ಸೋಂಕಿತರನ್ನು ಕಾಣುತ್ತಿರುವ ಮಹಾರಾಷ್ಟ್ರದಲ್ಲಿ ರಾಜ್ಯ ಸರಕಾರವು ಜನರಿಗೆ ಆರೋಗ್ಯ ಸೇವೆ ಒದಗಿಸಲು ಪರದಾಡುತ್ತಿದೆ. ಒಟ್ಟು 6.12 ಲಕ್ಷ ಮಂದಿ ಕೊರೊನಾ ಸೋಂಕಿತರಿದ್ದು ಒಟ್ಟಾರೆ 58,804 ಮಂದಿ ಇದುವರೆಗೂ ಕೊರೊನಾಗೆ ಬಲಿಯಾಗಿದ್ದಾರೆ.